ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಉ) ಅನ್ವಯಿಸುವುದಿಲ್ಲ.

ಬೆಂಗಳೂರು ನಗರದಲ್ಲಿ ನವಜಾತ ಶಿಶು ಪತ್ತೆ ಪ್ರಕರಣಗಳು

920 (409) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಕಳೆದ ಎರಡು ವರ್ಷಗಳಿಂದ ಎಷ್ಟು ನವಜಾತ ಶಿಶು ಪತ್ತೆ ಪ್ರಕಣಗಳು ದಖಿಲಾಗಿವೆ;

ಆ) ನವಜಾತ ಶಿಶುಗಳನ್ನು ಪೋಷಿಸಲು ತಮಿಳುನಾಡು ಸರ್ಕಾರ ಜಾರಿಗೆ ತಂದ ರೀತಿಯಲ್ಲಿ "ಕ್ರೆಡಲ್" ವಿಶೇಷ ಯೋಜನೆಯನ್ನು ರಾಜ್ಯದಲ್ಲೂ ಜಾರಿಗೆ ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2008-09 ರಲ್ಲಿ ಎರಡು (ಒಂದು: ಗಂಡು ಮತ್ತು ಒಂದು ಹೆಣ್ಣು), 2009-10ರಲ್ಲಿ ಒಂದು (ಹೆಣ್ಣು) ನವಜಾತ ಶಿಶು ಪ್ರಕರಣಗಳು ದಾಖಲಾಗಿವೆ.

ಆ) ಅಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ರಾಜ್ಯದಲ್ಲಿ ಹಿಂದುಳಿದ ಜನಗಣತಿ ನಗ್ಗೆ

921 (410) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹಿಂದುಳಿದ ಜಾತಿಗಳ ಜನಗಣತಿ ಮಾಡಲು 2005 ಮತ್ತು 2006ನೇ ಸಾಲಿನಲ್ಲಿ ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು;

ಆ) ಈ ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು;

ಇ) ಹಿಂದುಳಿದ ವರ್ಗಗಳ ಜಾತಿವಾರು ಸಮೀಕ್ಷೆ ಪೂರ್ಣ ಗೊಂಡಿದೆಯೇ;

ಈ) ಜಾತಿವಾರು ಜನಗಣತಿಯ ಇತ್ತೀಚಿನ ಬೆಳವಣಿಗೆ ಏನು?